**All India Radio: Bangalore**
**National Bulletin In Kannada**
**20.04.2026 07.35 a.m.**
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
**20.04.2026 07.35 a.m.**
**<><><><>**

ಮುಖ್ಯಾಂಶಗಳು

1. ನವದೆಹಲಿಯಲ್ಲಿ ಇಂದು ದಕ್ಷಿಣ ಕೊರಿಯಾ ಅಧ್ಯಕ್ಷರೊಂದಿಗೆ ಮಾತುಕತೆ ನಡೆಸಲಿರುವ ಪ್ರಧಾನಿ ನರೇಂದ್ರ ಮೋದಿ
2. ವಾಷಿಂಗ್ಟನ್‌ನಲ್ಲಿ ಇಂದಿನಿಂದ ಭಾರತ-ಅಮೆರಿಕ ಪ್ರಸ್ತಾವಿತ ದ್ವಿಪಕ್ಷೀಯ ವ್ಯಾಪಾರ ಒಪ್ಪಂದದ ಮೊದಲ ಹಂತದ ಮಾತುಕತೆಗಳು ಪುನರಾರಂಭ
3. ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಶ್ರೀಲಂಕಾ ಪ್ರವಾಸ : ಭಾರತದ ನೆರವಿನೊಂದಿಗೆ ನಿರ್ಮಾಣವಾಗುತ್ತಿರುವ ವಸತಿ ಯೋಜನಾ ಪ್ರದೇಶ ವೀಕ್ಷಣೆ
4. ಶಾಂತಿ ಮಾತುಕತೆಗೆ ಒಪ್ಪಿಗೆ ಕುರಿತ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಹೇಳಿಕೆ ತಿರಸ್ಕರಿಸಿದ ಇರಾನ್
5. ಐಪಿಎಲ್ ಟಿ-೨೦ ಕ್ರಿಕೆಟ್ : ಲಖನೌ ಸೂಪರ್ ಜೈಂಟ್ಸ್ ವಿರುದ್ಧ ಪಂಜಾಬ್ ಕಿಂಗ್ಸ್‌ಗೆ ೫೪ ರನ್‌ಗಳ ಬೃಹತ್ ಜಯ

<><><><>

ಭಾರತ ಮತ್ತು ದಕ್ಷಿಣ ಕೊರಿಯಾ ನಡುವಿನ ದ್ವಿಪಕ್ಷೀಯ ಬಾಂಧವ್ಯವನ್ನು ಮತ್ತಷ್ಟು ಬಲಪಡಿಸುವ ನಿಟ್ಟಿನಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರಿಂದು ನವದೆಹಲಿಯಲ್ಲಿ ದಕ್ಷಿಣ ಕೊರಿಯಾದ ಅಧ್ಯಕ್ಷ ಲೀ ಜೇ ಮ್ಯುಂಗ್ ಅವರೊಂದಿಗೆ ಮಹತ್ವದ ಮಾತುಕತೆ ನಡೆಸಲಿದ್ದಾರೆ. ಉಭಯ ನಾಯಕರ ಈ ಭೇಟಿಯು ಹಡಗು ನಿರ್ಮಾಣ, ವ್ಯಾಪಾರ, ಹೂಡಿಕೆ, ಕೃತಕ ಬುದ್ಧಿಮತ್ತೆ, ಸೆಮಿಕಂಡಕ್ಟರ್‌ಗಳು ಹಾಗೂ ಉದಯೋನ್ಮುಖ ತಂತ್ರಜ್ಞಾನಗಳೂ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಪರಸ್ಪರ ಸಹಕಾರವನ್ನು ವಿಸ್ತರಿಸುವ ಗುರಿಯನ್ನು ಹೊಂದಿದೆ. ಇದರೊಂದಿಗೆ ಸಾಂಸ್ಕೃತಿಕ ವಿನಿಮಯ ಮತ್ತು ಉಭಯ ದೇಶಗಳ ಜನರ ನಡುವಿನ ಸಂಪರ್ಕವನ್ನು ವೃದ್ಧಿಸುವ ಕುರಿತು ಸಮಾಲೋಚನೆ ನಡೆಸಲಿದ್ದು, ಪ್ರಾದೇಶಿಕ ಹಾಗೂ ಜಾಗತಿಕ ಹಿತಾಸಕ್ತಿಯ ವಿಷಯಗಳ ಬಗ್ಗೆಯೂ ಚರ್ಚಿಸಲಿದ್ದಾರೆ. ಈ ಸಂದರ್ಭದಲ್ಲಿ ದಕ್ಷಿಣ ಕೊರಿಯಾದ ಅಧ್ಯಕ್ಷರಿಗಾಗಿ ಪ್ರಧಾನಮಂತ್ರಿಯವರು ಔತಣಕೂಟವನ್ನು ಏರ್ಪಡಿಸಿದ್ದಾರೆ. ಭಾರತಕ್ಕೆ ಮೂರು ದಿನಗಳ ಅಧಿಕೃತ ಭೇಟಿಗಾಗಿ ನಿನ್ನೆ ನವದೆಹಲಿಗೆ ಆಗಮಿಸಿದ ಅಧ್ಯಕ್ಷ ಲೀ ಜೇ ಮ್ಯುಂಗ್ ಅವರನ್ನು ಕೇಂದ್ರ ಸಚಿವ ಹರ್ಷ್ ಮಲ್ಹೋತ್ರಾ ಅವರು ಬರಮಾಡಿಕೊಂಡರು. ಅಧ್ಯಕ್ಷರೊಂದಿಗೆ ದಕ್ಷಿಣ ಕೊರಿಯಾದ ಪ್ರಥಮ ಮಹಿಳೆ ಕಿಮ್ ಹೇ ಕ್ಯುಂಗ್ ಮತ್ತು ಸಚಿವರು, ಹಿರಿಯ ಅಧಿಕಾರಿಗಳು ಹಾಗೂ ಉದ್ಯಮಿಗಳನ್ನೊಳಗೊಂಡ ಉನ್ನತ ಮಟ್ಟದ ನಿಯೋಗವು ಆಗಮಿಸಿದೆ. ಇದು ಅಧ್ಯಕ್ಷ ಲೀ ಅವರ ಮೊದಲ ಭಾರತ ಪ್ರವಾಸವಾಗಿದ್ದು, ಅವರು ರಾಷ್ಟ್ರಪತಿ ದ್ರೌಪದಿ ಮುರ್ಮು ಅವರನ್ನೂ ಭೇಟಿ ಮಾಡಿ ಮಾತುಕತೆ ನಡೆಸಲಿದ್ದಾರೆ. ಇದಕ್ಕೂ ಮುನ್ನ ವಿದೇಶಾಂಗ ವ್ಯವಹಾರಗಳ ಸಚಿವ ಡಾ. ಎಸ್. ಜೈಶಂಕರ್ ದಕ್ಷಿಣ ಕೊರಿಯಾ ಅಧ್ಯಕ್ಷರನ್ನು ಭೇಟಿ ಮಾಡಿ, ವಿವಿಧ ಕ್ಷೇತ್ರಗಳಲ್ಲಿ ದ್ವಿಪಕ್ಷೀಯ ಬಾಂಧವ್ಯವನ್ನು ಬಲಪಡಿಸುವ ಅವರ ಬದ್ಧತೆಯನ್ನು ಶ್ಲಾಘಿಸಿದರು.

<><><><>

ಭಾರತ ಮತ್ತು ಅಮೆರಿಕ ನಡುವಿನ ಪ್ರಸ್ತಾವಿತ ದ್ವಿಪಕ್ಷೀಯ ವ್ಯಾಪಾರ ಒಪ್ಪಂದದ ಮೊದಲ ಹಂತದ ಮಾತುಕತೆಗಳು ಇಂದು ವಾಷಿಂಗ್ಟನ್ ಡಿಸಿಯಲ್ಲಿ ಪುನರಾರಂಭಗೊಳ್ಳಲಿವೆ. ಇಂದಿನಿಂದ ಇದೇ ೨೨ ರವರೆಗೆ ನಡೆಯಲಿರುವ ಈ ಮೂರು ದಿನಗಳ ಸಭೆಯಲ್ಲಿ ವಾಣಿಜ್ಯ ಇಲಾಖೆಯ ಹೆಚ್ಚುವರಿ ಕಾರ್ಯದರ್ಶಿ ದರ್ಪಣ್ ಜೈನ್ ಅವರು ಭಾರತೀಯ ನಿಯೋಗದ ನೇತೃತ್ವ ವಹಿಸಲಿದ್ದಾರೆ. ಈ ನಿಯೋಗದಲ್ಲಿ ಕಸ್ಟಮ್ಸ್ ಮತ್ತು ವಿದೇಶಾಂಗ ವ್ಯವಹಾರಗಳ ಸಚಿವಾಲಯದ ಹಿರಿಯ ಅಧಿಕಾರಿಗಳು ಭಾಗವಹಿಸಲಿದ್ದು, ಬದಲಾಗುತ್ತಿರುವ ಜಾಗತಿಕ ಸುಂಕದ ವಿದ್ಯಮಾನಗಳ ಹಿನ್ನೆಲೆಯಲ್ಲಿ ವ್ಯಾಪಾರ ಚೌಕಟ್ಟನ್ನು ಮರುಹೊಂದಿಸುವ ಕುರಿತು ಚರ್ಚೆಗಳು ನಡೆಯಲಿವೆ. ಕಳೆದ ನಾಲ್ಕು ತಿಂಗಳ ಅವಧಿಯಲ್ಲಿ ಉಭಯ ದೇಶಗಳ ನಡುವೆ ವರ್ಚುವಲ್ ಮೂಲಕ ಮಾತುಕತೆಗಳು ಮುಂದುವರಿದಿದ್ದವು. ಆದರೆ, ಅಮೆರಿಕಾದ ಸುಂಕ ಪದ್ಧತಿಯಲ್ಲಿ ಉಂಟಾಗಿರುವ ಬದಲಾವಣೆಗಳ ನಂತರ ನಡೆಯುತ್ತಿರುವ ಈ ಭೇಟಿಯು ಹೆಚ್ಚಿನ ಪ್ರಾಮುಖ್ಯತೆ ಪಡೆದಿದೆ.

<><><><>

ಶ್ರೀಲಂಕಾ ಪ್ರವಾಸದಲ್ಲಿರುವ ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಇಂದು ತಮ್ಮ ಅಧಿಕೃತ ಭೇಟಿಯ ಎರಡನೇ ದಿನವಾದ ಇಂದು ನುವಾರಾ ಎಲಿಯಾಕ್ಕೆ ಪ್ರಯಾಣಿಸಲಿದ್ದಾರೆ. ಭಾರತ ಮತ್ತು ಶ್ರೀಲಂಕಾ ನಡುವಿನ ಅಭಿವೃದ್ಧಿ ಪಾಲುದಾರಿಕೆಯನ್ನು ಬಲಪಡಿಸುವ ಮತ್ತು

ಅಲ್ಲಿನ ಸಮುದಾಯಗಳೊಂದಿಗೆ ನೇರ ಸಂಪರ್ಕ ಸಾಧಿಸುವ ನಿಟ್ಟಿನಲ್ಲಿ ಈ ಭೇಟಿಯು ಅತ್ಯಂತ ಮಹತ್ವದ್ದಾಗಿದೆ. ಈ ಸಂದರ್ಭದಲ್ಲಿ ಅವರು ಭಾರತದ ನೆರವಿನೊಂದಿಗೆ ನಿರ್ಮಾಣವಾಗುತ್ತಿರುವ ವಸತಿ ಯೋಜನೆಯ ಪ್ರದೇಶಗಳನ್ನು ವೀಕ್ಷಿಸಲಿದ್ದಾರೆ ಹಾಗೂ ಅಲ್ಲಿನ ಭಾರತೀಯ ಮೂಲದ ತಮಿಳು ಸಮುದಾಯದವರೊಂದಿಗೆ ನೇರ ಸಂವಾದ ನಡೆಸಲಿದ್ದಾರೆ. ಕೊಲಂಬೊದಲ್ಲಿ ನಡೆದ ಮೊದಲ ದಿನದ ಕಾರ್ಯಕ್ರಮಗಳಲ್ಲಿ, ಉಪರಾಷ್ಟ್ರಪತಿಗಳು ಶ್ರೀಲಂಕಾದ ಅಧ್ಯಕ್ಷ ಅನುರ ಕುಮಾರ ದಿಸ್ಸಾನಾಯಕೆ ಮತ್ತು ಪ್ರಧಾನಮಂತ್ರಿ ಹರಿಣಿ ಅಮರಸೂರಿಯಾ ಅವರೊಂದಿಗೆ ಸುದೀರ್ಘ ಮಾತುಕತೆ ನಡೆಸಿದರು. ಈ ಸಭೆಯಲ್ಲಿ ಉಭಯ ದೇಶಗಳ ಪರಸ್ಪರ ಸಹಕಾರ ಮತ್ತು ಹಿತಾಸಕ್ತಿಯ ವಿಷಯಗಳ ಕುರಿತು ಚರ್ಚಿಸಲಾಯಿತು. ಉಪರಾಷ್ಟ್ರಪತಿಯವರು, ಭಾರತೀಯ ಮೂಲದ ಸಮುದಾಯವನ್ನು ಉದ್ದೇಶಿಸಿ ಮಾತನಾಡಿದರು.

<><><>

ಉಪರಾಷ್ಟ್ರಪತಿಗಳ ಶ್ರೀಲಂಕಾ ಪ್ರವಾಸದ ಕುರಿತು ಕೊಲಂಬೊದಲ್ಲಿ ಮಾಹಿತಿ ನೀಡಿದ ವಿದೇಶಾಂಗ ಕಾರ್ಯದರ್ಶಿ ವಿಕ್ರಂಮಿಸ್ರಿ, ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಮತ್ತು ಶ್ರೀಲಂಕಾ ಅಧ್ಯಕ್ಷ ಅನುರ ಕುಮಾರ ದಿಸ್ಸಾನಾಯಕೆ ನಡುವಿನ ಸಭೆಯಲ್ಲಿ ಭಾರತ-ಶ್ರೀಲಂಕಾ ನಡುವೆ ಪ್ರಸ್ತಾವಿತ ತೈಲ ಪೈಪ್‌ಲೈನ್ ಸಂಪರ್ಕ ಮತ್ತು ಟ್ರೀಂಕೊ ಮಲಿಯಲ್ಲಿ ಇಂಧನ ಕೇಂದ್ರ ಸ್ಥಾಪಿಸುವ ಕುರಿತು ಸುಧೀರ್ಘವಾಗಿ ಚರ್ಚಿಸಲಾಗಿದೆ ಎಂದು ತಿಳಿಸಿದ್ದಾರೆ.

<><><>

ಇರಾನ್ ಮತ್ತು ಅಮೆರಿಕ ನಡುವಿನ ಉದ್ವಿಗ್ನತೆ ಮತ್ತಷ್ಟು ತಾರಕಕ್ಕೇರಿದ್ದು, ಹಾರ್ಮುಜ್ ಜಲಸಂಧಿಯ ಬಳಿ ನೌಕಾ ದಿಗ್ಬಂಧನವನ್ನು ಉಲ್ಲಂಘಿಸಲು ಯತ್ನಿಸಿದ ಇರಾನ್‌ನ 'ತೌಸ್ಕಾ' ಎಂಬ ಸರಕು ಹಡಗನ್ನು ಅಮೆರಿಕ ಪಡೆಗಳು ಬಲವಂತವಾಗಿ ವಶಪಡಿಸಿಕೊಂಡಿವೆ. ಅಮೆರಿಕ ನೌಕಾಪಡೆಯ ಎಚ್ಚರಿಕೆಯನ್ನು ನಿರ್ಲಕ್ಷಿಸಿ ಮುನ್ನುಗ್ಗುತ್ತಿದ್ದ ಹಡಗಿನ ಇಂಜಿನ್ ರೂಮ್‌ಗೆ ಹಾನಿ ಮಾಡುವ ಮೂಲಕ ಅದನ್ನು ತಡೆಯಲಾಗಿದ್ದು, ಪ್ರಸ್ತುತ ಹಡಗು ಅಮೆರಿಕದ ಮರೀನ್ ಪಡೆಯ ವಶದಲ್ಲಿದೆ ಎಂದು ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಸಾಮಾಜಿಕ ಜಾಲತಾಣದಲ್ಲಿ ತಿಳಿಸಿದ್ದಾರೆ. ಕಳೆದ ವಾರ ದಿಗ್ಬಂಧನ ಆರಂಭವಾದ ನಂತರ ನಡೆದ ಮೊದಲ ಪ್ರಮುಖ ಕಾರ್ಯಾಚರಣೆ ಇದಾಗಿದೆ. ಇನ್ನೊಂದೆಡೆ, ಅಮೆರಿಕದೊಂದಿಗೆ ಎರಡನೇ ಹಂತದ ಶಾಂತಿ ಮಾತುಕತೆಗೆ ಒಪ್ಪಿಗೆ ನೀಡಲಾಗಿದೆ ಎಂಬ ವರದಿಗಳನ್ನು ಇರಾನ್ ಅಧಿಕೃತವಾಗಿ ತಿರಸ್ಕರಿಸಿದೆ. ಅಮೆರಿಕಾದ ಅತಿಯಾದ ಬೇಡಿಕೆಗಳು ಮತ್ತು ಅದು ವಿಧಿಸಿರುವ ನೌಕಾ ದಿಗ್ಬಂಧನವು ಕದನ ವಿರಾಮದ ಉಲ್ಲಂಘನೆಯಾಗಿದೆ ಎಂದು ಇರಾನ್‌ನ ಸುದ್ದಿ ಸಂಸ್ಥೆ ಐಆರ್‌ಎನ್‌ಎ ವರದಿ ಮಾಡಿದೆ. ಪ್ರತೀಕಾರವಾಗಿ ಇರಾನ್, ಹಾರ್ಮುಜ್ ಜಲಸಂಧಿಯನ್ನು ಮುಚ್ಚಿದ್ದು, ವಾಣಿಜ್ಯ ಹಡಗುಗಳು ಕಡ್ಡಾಯವಾಗಿ ಪೂರ್ವಾನುಮತಿ ಪಡೆಯಬೇಕು ಮತ್ತು ಸೂಚಿಸಿದ ಮಾರ್ಗದಲ್ಲೇ ಸಂಚರಿಸಬೇಕು ಎಂದು ಎಚ್ಚರಿಸಿದೆ. ಇರಾನ್‌ನ ಈ ನಿಲುವನ್ನು ಕದನ ವಿರಾಮದ ಉಲ್ಲಂಘನೆ ಎಂದು ಕರೆದಿರುವ ಅಧ್ಯಕ್ಷ ಟ್ರಂಪ್, ಒಂದು ವೇಳೆ ಇರಾನ್ ಸಹಕರಿಸದಿದ್ದರೆ ಕಠಿಣ ಕ್ರಮ ಎದುರಿಸಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಿದ್ದಾರೆ.

<><><>

ಪಶ್ಚಿಮ ಏಷ್ಯಾದಲ್ಲಿನ ಉದ್ವಿಗ್ನತೆಯ ಹಿನ್ನೆಲೆಯಲ್ಲಿ, ಫೆಬ್ರವರಿ ೨೮ ರಿಂದ ಈವರೆಗೆ ಸುಮಾರು ೧೦.೯೭ ಲಕ್ಷ ಭಾರತೀಯರು ತಾಯ್ನಾಡಿಗೆ ಮರಳಿದ್ದಾರೆ ಎಂದು ಕೇಂದ್ರ ಸರ್ಕಾರ ತಿಳಿಸಿದೆ. ಭಾರತದ ಕಚ್ಚಾ ತೈಲ ಟ್ಯಾಂಕರ್ 'ದೇಶ್ ಗರಿಮಾ' ಏಪ್ರಿಲ್ ೨೨ ರಂದು ಸುರಕ್ಷಿತವಾಗಿ ಮುಂಬೈ ತಲುಪುವ ನಿರೀಕ್ಷೆಯಿದೆ. ಆದರೆ, ಕಳೆದ ೨೪ ಗಂಟೆಗಳಲ್ಲಿ ಹಾರ್ಮುಜ್ ಜಲಸಂಧಿಯಲ್ಲಿ ಭಾರತದ ಎರಡು ವಾಣಿಜ್ಯ ಹಡಗುಗಳ ಮೇಲೆ ಗುಂಡಿನ ದಾಳಿ ನಡೆದಿದ್ದು, ಅದೃಷ್ಟವಶಾತ್ ಸಿಬ್ಬಂದಿ ಪ್ರಾಣಾಪಾಯದಿಂದ ಪಾರಾಗಿದ್ದಾರೆ. ಈ ಘಟನೆಯ ಕುರಿತು ಭಾರತವು ಇರಾನ್ ರಾಯಭಾರಿಯನ್ನು ಕರೆಸಿ ತೀವ್ರ ಕಳವಳ ವ್ಯಕ್ತಪಡಿಸಿದೆ ಹಾಗೂ ವಾಣಿಜ್ಯ ಹಡಗುಗಳ ಸುರಕ್ಷಿತ ಸಂಚಾರಕ್ಕೆ ಕ್ರಮ ಕೈಗೊಳ್ಳುವಂತೆ ಒತ್ತಾಯಿಸಿದೆ. ಮತ್ತೊಂದೆಡೆ, ಪಶ್ಚಿಮ ಏಷ್ಯಾದ ವಿವಿಧ ದೇಶಗಳಿಂದ ವಿಮಾನಯಾನ ಕಾರ್ಯಾಚರಣೆ ಮುಂದುವರಿದಿದ್ದು, ಇರಾನ್‌ನಲ್ಲಿ ಸಿಲುಕಿದ್ದ ೨ ಸಾವಿರದ ೩೭೮ ಭಾರತೀಯರನ್ನು ಅರ್ಮೇನಿಯಾ ಮತ್ತು ಅಜೆರ್ಬೈಜಾನ್ ಮಾರ್ಗವಾಗಿ ಸುರಕ್ಷಿತವಾಗಿ ಸ್ಥಳಾಂತರಿಸಲಾಗಿದೆ. ಇವರಲ್ಲಿ ಒಂದು ಸಾವಿರಕ್ಕೂ ಹೆಚ್ಚು ವಿದ್ಯಾರ್ಥಿಗಳು ಹಾಗೂ ನೂರಾರು ಮೀನುಗಾರರು ಸೇರಿದ್ದಾರೆ. ಭಾರತೀಯರ ಸುರಕ್ಷತೆ ಮತ್ತು ಹಡಗುಗಳ ಸುಗಮ ಸಂಚಾರಕ್ಕಾಗಿ ಬಂದರು ಹಾಗೂ ವಿದೇಶಾಂಗ ಸಚಿವಾಲಯಗಳು ಸಮನ್ವಯದೊಂದಿಗೆ ಕಾರ್ಯನಿರ್ವಹಿಸುತ್ತಿವೆ.

<><><>

ಅಮೆರಿಕ ಮತ್ತು ಇರಾನ್ ನಡುವಿನ ಸಂಘರ್ಷದಿಂದಾಗಿ ಆಫ್ರಿಕಾ ರಾಷ್ಟ್ರಗಳಲ್ಲಿ ಉಲ್ಬಣಿಸಿರುವ ಆಹಾರ ಬಿಕ್ಕಟ್ಟನ್ನು ನೀಗಿಸಲು ಭಾರತವು ಮಾನವೀಯ ನೆರವಿನ ಹಸ್ತ ಚಾಚಿದೆ. ತೀವ್ರ ಬರಗಾಲದಿಂದ ಸಂಕಷ್ಟಕ್ಕೀಡಾಗಿರುವ ಮಲಾವಿ ಮತ್ತು ಬುರ್ಕಿನಾ ಫಾಸೊಗೆ ತಲಾ ೧

ಸಾವಿರದ ಮೆಟ್ರಿಕ್ ಟನ್ ಹಾಗೂ ಮೊಜಾಂಬಿಕ್‌ಗೆ ೫೦೦ ಮೆಟ್ರಿಕ್ ಟನ್ ಅಕ್ಕಿಯೊಂದಿಗೆ ಅಗತ್ಯ ಔಷಧ ಮತ್ತು ಪರಿಹಾರ ಸಾಮಗ್ರಿಗಳನ್ನು ಭಾರತ ರವಾನಿಸಿದೆ ಎಂದು ದಕ್ಷಿಣ ಆಫ್ರಿಕಾದ ಮಾಧ್ಯಮವೊಂದು ವರದಿ ಮಾಡಿದೆ. ಜಾಗತಿಕ ಯುದ್ಧ ಪರಿಸ್ಥಿತಿಗಳ ನಡುವೆ ಆಫ್ರಿಕಾದ ೩೧ ರಾಷ್ಟ್ರಗಳು ಎದುರಿಸುತ್ತಿರುವ ಭೀಕರ ಆಹಾರ ಅಭದ್ರತೆಯತ್ತ ಭಾರತ ಗಮನಹರಿಸಿರುವುದು ಜಾಗತಿಕ ಮಟ್ಟದಲ್ಲಿ ಮೆಚ್ಚುಗೆಗೆ ಪಾತ್ರವಾಗಿದೆ. ಪಶ್ಚಿಮ ಏಷ್ಯಾದ ಅಸ್ಥಿರತೆಯಿಂದಾಗಿ ಆಹಾರ ಮತ್ತು ಇಂಧನ ಬೆಲೆ ಏರಿಕೆಯಾಗಿ ಆಫ್ರಿಕಾದ ಆರ್ಥಿಕತೆಯ ಮೇಲೆ ವ್ಯತಿರಿಕ್ತ ಪರಿಣಾಮ ಬೀರಿದೆ. ಈ ಕಠಿಣ ಸಂದರ್ಭದಲ್ಲಿ 'ಜಾಗತಿಕ ದಕ್ಷಿಣ' ರಾಷ್ಟ್ರಗಳ ವಿಶ್ವಾಸಾರ್ಹ ಪಾಲುದಾರನಾಗಿ ಭಾರತವು ತೋರಿರುವ ಈ ಬೆಂಬಲವು ಅತ್ಯಂತ ಸಮಯೋಚಿತ ಮತ್ತು ಮಹತ್ವದ್ದಾಗಿದೆ ಎಂದು ವಿಶ್ಲೇಷಿಸಲಾಗಿದೆ.

<><><><>

ಇದೇ ೨೩ರಂದು ನಡೆಯಲಿರುವ ಪಶ್ಚಿಮ ಬಂಗಾಳ ವಿಧಾನಸಭಾ ಚುನಾವಣೆಯ ಮೊದಲ ಹಂತದ ಮತದಾನಕ್ಕಾಗಿ ಚುನಾವಣಾ ಆಯೋಗವು ೧೫೨ ಕ್ಷೇತ್ರಗಳಲ್ಲಿ ಒಟ್ಟು ೨ ಸಾವಿರದ ೧೯೩ ಕ್ಷಿಪ್ರ ಪ್ರತಿಕ್ರಿಯಾ ತಂಡಗಳನ್ನು ನಿಯೋಜಿಸಿದೆ. ಯಾವುದೇ ಅಹಿತಕರ ಘಟನೆಗಳು ಸಂಭವಿಸಿದಲ್ಲಿ ತಕ್ಷಣವೇ ಸ್ಪಂದಿಸಲು ಈ ತಂಡಗಳನ್ನು ಸಜ್ಜುಗೊಳಿಸಲಾಗಿದೆ. ವಿಶೇಷವಾಗಿ ಅತಿಸೂಕ್ಷ್ಮ ಪ್ರದೇಶಗಳು ಮತ್ತು ಅಂತಾರಾಷ್ಟ್ರೀಯ ಗಡಿಭಾಗದ ಜಿಲ್ಲೆಗಳಲ್ಲಿ ಹೆಚ್ಚಿನ ನಿಗಾ ವಹಿಸಲಾಗಿದ್ದು, ಮುಕ್ತ ಮತ್ತು ನ್ಯಾಯಸಮ್ಮತ ಮತದಾನಕ್ಕೆ ಆದ್ಯತೆ ನೀಡಲಾಗಿದೆ.

<><><><>

ನವಚಂಡಿಗಡದ ಮುಲ್ಲಾನ್‌ಪುರ್‌ದಲ್ಲಿ ಕಳೆದ ರಾತ್ರಿ ನಡೆದ ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ಲಖನೌ ಸೂಪರ್ ಜೈಂಟ್ಸ್ ವಿರುದ್ಧ ಪಂಜಾಬ್ ಕಿಂಗ್ಸ್ ೫೪ ರನ್‌ಗಳ ಬೃಹತ್ ಗೆಲುವು ದಾಖಲಿಸಿದೆ. ಟಾಸ್ ಸೋತು ಮೊದಲು ಬ್ಯಾಟಿಂಗ್ ಮಾಡಿದ ಪಂಜಾಬ್ ಕಿಂಗ್ಸ್ ತಂಡ ಪ್ರಿಯಾಂಶ್ ಆರ್ಯ ಮತ್ತು ಕೂಪರ್ ಕೊನೋಲಿ ಅವರ ಅದ್ಭುತ ಬ್ಯಾಟಿಂಗ್ ಪ್ರದರ್ಶನದೊಂದಿಗೆ ನಿಗದಿತ ೨೦ ಓವರ್‌ಗಳಲ್ಲಿ ೭ ವಿಕೆಟ್ ನಷ್ಟಕ್ಕೆ ೨೫೪ ರನ್ ಗಳಿಸಿತು. ಪಂಜಾಬ್ ನೀಡಿದ್ದ ೨೫೫ ರನ್‌ಗಳ ಬೃಹತ್ ಗುರಿ ಬೆನ್ನತ್ತಿದ ಲಖನೌ ತಂಡ ನಿಗದಿತ ೨೦ ಓವರ್‌ಗಳಲ್ಲಿ ೫ ವಿಕೆಟ್ ನಷ್ಟಕ್ಕೆ ೨೦೦ ರನ್‌ಗಳಿಸಲಷ್ಟೇ ಶಕ್ತವಾಯಿತು.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>